## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸ್ವಾಮಿ ವಿವೇಕಾನಂದರವರ 154ನೇ ಜನ್ಮದಿನಾಚರಣೆಯನ್ನು ದಿನಾಂಕ:12.01.2017 ರಿಂದ 18.01.2017 ರವರೆಗೆ ಆಚರಿಸುವ ಬಗ್ಗೆ.

- - - - -

**ಓದಲಾಗಿದೆ:**

ಸರ್ಕಾರದ ಆದೇಶ ಸಂಖ್ಯೆ: ಇಡಿ 264 ಯುಜಿಹೆಚ್ 2015 ದಿನಾಂಕ: 30ನೇ ಡಿಸೆಂಬರ್ 2015.

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ:30ನೇ ಡಿಸೆಂಬರ್ 2015ರ ಆದೇಶದಲ್ಲಿ, ಸ್ವಾಮಿ ವಿವೇಕಾನಂದರ ಜನ್ಮದಿನಾಚರಣೆ ಅಂಗವಾಗಿ ದಿನಾಂಕ:12.01.2016 ರಿಂದ 19.01.2016 ರವರೆಗೆ ರಾಷ್ಟ್ರೀಯ ಯುವ ದಿನಾಚರಣೆಯ ಸಪ್ತಾಹವನ್ನು ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳು, ಕಾಲೇಜು ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಇಲಾಖೆ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಕಾಲೇಜುಗಳಲ್ಲಿ ಆಚರಿಸುವಂತೆ ಆದೇಶಿಸಲಾಗಿತ್ತು.

ಅದರಂತೆ, 2017ನೇ ಸಾಲಿನಲ್ಲಿಯೂ ಸಹ ದಿನಾಂಕ:12.01.2017 ರಿಂದ 18.01.2017 ರವರೆಗೆ ಸ್ವಾಮಿ ವಿವೇಕಾನಂದರ ಜನ್ಮದಿನಾಚರಣೆಯನ್ನು ಆಚರಿಸಲು ದಿನಾಂಕ:02.01.2017 ರಂದು ಮಾನ್ಯ ಉನ್ನತ ಶಿಕ್ಷಣ ಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವರು, ಶಾಸಕರು, ಅಧಿಕಾರಿಗಳು ಹಾಗೂ ಇತರರನ್ನೊಳಗೊಂಡ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಲಾಗಿದೆ.

ಅದರಂತೆ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 136 ಯುಜಿಹೆಚ್ 2016 ಬೆಂಗಳೂರು, ದಿನಾಂಕ: 05-01-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳು, ಕಾಲೇಜು ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಇಲಾಖೆ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಕಾಲೇಜುಗಳಲ್ಲಿ ದಿನಾಂಕ:12.01.2017 ರಿಂದ 18.01.2017 ರವರೆಗೆ ಸ್ವಾಮಿ ವಿವೇಕಾನಂದರ 154ನೇ ಜನ್ಮದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವ ಪ್ರಯುಕ್ತ ಕಳೆದ ಸಾಲಿನಲ್ಲಿ ಕೈಗೊಂಡ ಕಾರ್ಯಕ್ರಮಗಳಂತೆ ಈ ಬಾರಿಯೂ ಸಹ ಚರ್ಚಾ ಸ್ಪರ್ಧೆ, ಪ್ರಬಂಧ ಸ್ಪರ್ಧೆ, ಭಾಷಣ ಹಾಗೂ ಇನ್ನಿತರೆ ಚಟುವಟಿಕೆಗಳನ್ನು ನಡೆಸಿ ಸ್ವಾಮಿ ವಿವೇಕಾನಂದರ ವಿಚಾರಧಾರೆ ಹಾಗೂ ಧ್ಯೇಯೋದ್ದೇಶಗಳ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ದಿಸೆಯಲ್ಲಿ ಅರ್ಥಪೂರ್ಣವಾದ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಕೆ. ಶಿವಲಿಂಗಯ್ಯ 5/1

(ಕೆ.ಶಿವಲಿಂಗಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ).

ಗೆ:

1) ಎಲ್ಲಾ ವಿಶ್ವವಿದ್ಯಾಲಯಗಳ ಕುಲಪತಿಗಳು – (ಸರ್ಕಾರದ ಉಪ ಕಾರ್ಯದರ್ಶಿಗಳು (ವಿ.ವಿ.) ರವರ ಮೂಲಕ).
2) ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.

4) ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
5) ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
6) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
7) ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್‌ಗಳ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು.
8) ಮುಖ್ಯ ಆಡಳಿತಾಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ.
9) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು/ಮೈಸೂರು/ ಮಂಗಳೂರು / ಶಿವಮೊಗ್ಗ / ಧಾರವಾಡ / ಕಲಬುರಗಿ (ಕಾಲೇಜು ಶಿಕ್ಷಣ ಆಯುಕ್ತರ ಮುಖಾಂತರ)
10) ಎಲ್ಲಾ ಪ್ರಾಂಶುಪಾಲರುಗಳು, ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಪ್ರಥಮ ದರ್ಜೆ ಕಾಲೇಜುಗಳು / ಇಂಜಿನಿಯರಿಂಗ್ ಕಾಲೇಜುಗಳು / ಪಾಲಿಟೆಕ್ನಿಕ್ ಕಾಲೇಜುಗಳು(ಕಾಲೇಜು ಶಿಕ್ಷಣ ಆಯುಕ್ತರು/ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ)
11) ಎಲ್ಲಾ ಪ್ರಾಂಶುಪಾಲರುಗಳು, ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳು(ಪದವಿ ಪೂರ್ವ ಶಿಕ್ಷಣ ನಿರ್ದೇಶಕರ ಮುಖಾಂತರ)
12) ಮುಖ್ಯ ಆಡಳಿತಾಧಿಕಾರಿ, ರಾಮಕೃಷ್ಣ ಮಠ, ಬುಲ್ ಟೆಂಪಲ್ ರಸ್ತೆ, ಬೆಂಗಳೂರು-19.

<u>ಪ್ರತಿ:</u>

1) ಮಾನ್ಯ ಉನ್ನತ ಶಿಕ್ಷಣ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
2) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರು
5) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯುವಜನ ಸೇವಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರು
6) ಸರ್ಕಾರದ ಕಾರ್ಯದರ್ಶಿಗಳು, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ವಿಕಾಸಸೌಧ, ಬೆಂಗಳೂರು.
7) ಸರ್ಕಾರದ ಉಪ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು) – ಅಗತ್ಯ ಕ್ರಮಕ್ಕಾಗಿ.
8) ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಮತ್ತು ಕಾಲೇಜು ಶಿಕ್ಷಣ).
9) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸ್ವಾಮಿ ವಿವೇಕಾನಂದರವರ 154ನೇ ಜನ್ಮದಿನಾಚರಣೆಯನ್ನು ದಿನಾಂಕ:12.01.2017 ರಿಂದ 18.01.2017 ರವರೆಗೆ ಆಚರಿಸಲು ಸಂಘಟನಾ ಸಮಿತಿಯನ್ನು ರಚಿಸುವ ಬಗ್ಗೆ.

- - - - -

**ಓದಲಾಗಿದೆ:**

ಸರ್ಕಾರದ ಆದೇಶ ಸಂಖ್ಯೆ: ಇಡಿ 264 ಯುಜಿಹೆಚ್ 2015 ದಿನಾಂಕ: 30ನೇ ಡಿಸೆಂಬರ್ 2015 ಮತ್ತು 02ನೇ ಜನವರಿ 2016.

**ಪ್ರಸ್ತಾವನೆ:**

ಮೇಲೆ ಓದಲಾದ ಸರ್ಕಾರಿ ಆದೇಶಗಳಲ್ಲಿ, ಸ್ವಾಮಿ ವಿವೇಕಾನಂದರ ಜನ್ಮದಿನಾಚರಣೆ ಅಂಗವಾಗಿ ದಿನಾಂಕ:12.01.2016 ರಿಂದ 19.01.2016 ರವರೆಗೆ ರಾಷ್ಟ್ರೀಯ ಯುವ ದಿನಾಚರಣೆಯ ಸಪ್ತಾಹವನ್ನು ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳು, ಕಾಲೇಜು ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಇಲಾಖೆಯ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಕಾಲೇಜುಗಳಲ್ಲಿ ಆಚರಿಸುವಂತೆ ಆದೇಶಿಸಲಾಗಿತ್ತು ಹಾಗೂ ರಾಜ್ಯ ಮಟ್ಟದಲ್ಲಿ ಸ್ವಾಮಿ ವಿವೇಕಾನಂದ ರವರ ಜನ್ಮದಿನಾಚರಣೆ ಅಂಗವಾಗಿ ಸರ್ಕಾರ ಮತ್ತು ಸರ್ಕಾರೇತರ ಸದಸ್ಯರ ಸಂಘಟನಾ ಸಮಿತಿಯನ್ನು ಸಹ ರಚಿಸಲಾಗಿತ್ತು.

ಅದರಂತೆ, 2017ನೇ ಸಾಲಿನಲ್ಲಿಯೂ ಸಹ ದಿನಾಂಕ:12.01.2017 ರಿಂದ 18.01.2017 ರವರೆಗೆ (ಉಭಯ ದಿನಗಳೂ ಸೇರಿ) ಸ್ವಾಮಿ ವಿವೇಕಾನಂದರ 154ನೇ ಜನ್ಮದಿನಾಚರಣೆಯನ್ನು ಆಚರಿಸಲು, ದಿನಾಂಕ:02.01.2017 ರಂದು ಮಾನ್ಯ ಉನ್ನತ ಶಿಕ್ಷಣ ಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವರು, ಶಾಸಕರು, ಅಧಿಕಾರಿಗಳು ಹಾಗೂ ಇತರರನ್ನೊಳಗೊಂಡಂತೆ ನಡೆದ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಲಾಗಿದೆ ಮತ್ತು ದಿನಾಂಕ:18-01-2017 ರಂದು ರಾಜ್ಯಮಟ್ಟದಲ್ಲಿ ಸ್ವಾಮಿ ವಿವೇಕಾನಂದರ ಜಯಂತಿಯನ್ನು ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಡೆಸಲೂ ಸಹ ತೀರ್ಮಾನಿಸಲಾಗಿದೆ. ಈ ಸಂಬಂಧ ರಾಜ್ಯ ಮಟ್ಟದ ಸಮಾರಂಭವನ್ನು ಅರ್ಥಪೂರ್ಣವಾಗಿ ಆಚರಿಸಲು ಪ್ರಸ್ತುತ ಸಾಲಿನಲ್ಲಿಯೂ ಸಹ ಒಂದು ಸಂಘಟನಾ ಸಮಿತಿಯನ್ನು ರಚಿಸಲು ತೀರ್ಮಾನಿಸಲಾಗಿದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 136 ಯುಜಿಹೆಚ್ 2016 ಬೆಂಗಳೂರು, ದಿನಾಂಕ:05-01-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ದಿನಾಂಕ:12-01-2017 ರಿಂದ 18-01-2017 ರವರೆಗೆ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಹಾಗೂ ದಿನಾಂಕ:18-01-2017 ರಂದು ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ರಾಜ್ಯ ಮಟ್ಟದ ಸ್ವಾಮಿ ವಿವೇಕಾನಂದರವರ ಜನ್ಮದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವ ಸಂಬಂಧದಲ್ಲಿ ಈ ಕೆಳಕಂಡ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

1. ಶ್ರೀಮತಿ ಶಿಖಾ ಸಿ. ಭಾ.ಆ.ಸೇ. – ಅಧ್ಯಕ್ಷರು
   ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ.
2. ಕುಲಪತಿಗಳು, ಬೆಂಗಳೂರು ವಿಶ್ವವಿದ್ಯಾನಿಲಯ, ಬೆಂಗಳೂರು – ಉಪಾಧ್ಯಕ್ಷರು
3. ಶ್ರೀ ಡಿ.ಆರ್.ಪಾಟೀಲ್, – ಸಮಿತಿ ಸದಸ್ಯರು
   ಮಾಜಿ ಶಾಸಕರು, ಗದಗ
4. ಶ್ರೀ ನೆ.ಲ.ನರೇಂದ್ರಬಾಬು – ಸಮಿತಿ ಸದಸ್ಯರು
   ಮಾಜಿ ಶಾಸಕರು, ಬೆಂಗಳೂರು.
5. ನಾಡೋಜ ಶ್ರೀ ಬರಗೂರು ರಾಮಚಂದ್ರಪ್ಪ, – ಸಮಿತಿ ಸದಸ್ಯರು
   ಖ್ಯಾತ ಸಾಹಿತಿಗಳು.
6. ಶ್ರೀ ಹೆಚ್.ಯು.ತಳವಾರ್, – ಸಮಿತಿ ಸದಸ್ಯರು
   ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ.
7. ಆಯುಕ್ತರು, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ – ಸಮಿತಿ ಸದಸ್ಯರು

8. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ – ಸಮಿತಿ ಸದಸ್ಯರು
9. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ – ಸಮಿತಿ ಸದಸ್ಯರು
10. **ಶ್ರೀಮತಿ ಶಿಲ್ಪ, ಕೆ.ಎ.ಎಸ್., ಮುಖ್ಯ ಆಡಳಿತಾಧಿಕಾರಿ, ಕಾಲೇಜು ಶಿಕ್ಷಣ ಇಲಾಖೆ. – ಸಮಿತಿ ಸದಸ್ಯರು & ಸಂಪರ್ಕಾಧಿಕಾರಿಗಳು**
11. **ಶ್ರೀ ಶ್ರೀಕಾಂತ್, ಸಮನ್ವಯಾಧಿಕಾರಿ, ಕಾಲೇಜು ಶಿಕ್ಷಣ ಇಲಾಖೆ. – ಸಮಿತಿ ಸದಸ್ಯರು & ಸಂಪರ್ಕಾಧಿಕಾರಿಗಳು**

**(ಕ್ರಮ ಸಂಖ್ಯೆ:7, 8, 9 & 10ರಲ್ಲಿ ಇರುವ ಅಧಿಕಾರಿಗಳು ಸದರಿ ಕಾರ್ಯಕ್ರಮಗಳಿಗೆ ಸಂಬಂಧಪಟ್ಟಂತಹ ಇಲಾಖೆಗಳ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದು, ಕಾರ್ಯಕ್ರಮದ ಅನುಷ್ಠಾನಕ್ಕೆ ಬೇಕಾದ ಎಲ್ಲಾ ಚಟುವಟಿಕೆಗಳನ್ನು ಸಮನ್ವಯಗೊಳಿಸಿ ಸುಗಮವಾಗಿ ನಡೆಯಲು ಕ್ರಮವಹಿಸುವುದು)**

12. ಡಾ:ಗಣನಾಥಶೆಟ್ಟಿ, ಎನ್.ಎಸ್.ಎಸ್.ನ ರಾಜ್ಯ ಸಂಯೋಜಕರು – ಸಮಿತಿ ಸದಸ್ಯರು
13. ಶ್ರೀ ರಾಮಕೃಷ್ಣ ಮಿಷನ್ / ಮಠದ ಹಿರಿಯ ಪ್ರತಿನಿಧಿಗಳು – ಸಮಿತಿ ಸದಸ್ಯರು
14. ಹಿರಿಯ ಪದಾಧಿಕಾರಿ, ನೆಹರು ಯುವ ಕೇಂದ್ರ – ಸಮಿತಿ ಸದಸ್ಯರು
15. ಶ್ರೀ ಮಂಜುನಾಥ್, ಎನ್‌ಎಸ್‌ಯುಐ ರಾಜ್ಯ ಅಧ್ಯಕ್ಷರು – ಸಮಿತಿ ಸದಸ್ಯರು

ಮೇಲ್ಕಂಡ ಸಮಿತಿಯು ರಾಜ್ಯ ಮಟ್ಟದಲ್ಲಿ ಸ್ವಾಮಿ ವಿವೇಕಾನಂದರವರ ಜನ್ಮದಿನಾಚರಣೆ ಅಂಗವಾಗಿ ದಿನಾಂಕ:12-01-2017 ರಿಂದ 18-01-2017 ರವರೆಗೆ (ಉಭಯ ದಿನಗಳು ಸೇರಿ) **"ರಾಷ್ಟ್ರೀಯ ಯುವ ದಿನಾಚರಣೆಯ ಸಪ್ತಾಹ"** ವನ್ನು ಅರ್ಥಪೂರ್ಣವಾಗಿ ಮತ್ತು ವಿಜೃಂಭಣೆಯಾಗಿ ಆಚರಿಸಲು ಅವಶ್ಯಕತೆಗನುಸಾರ ಕಾಲಕಾಲಕ್ಕೆ ಸಭೆಗಳನ್ನು ನಡೆಸಿ ಪೂರ್ವ ಸಿದ್ಧತೆಯೊಂದಿಗೆ ಕಾರ್ಯಕ್ರಮ ನಿರ್ವಹಿಸಲು ಮೇಲ್ಕಂಡ ಸಮಿತಿಯನ್ನು ರಚಿಸಿ ಸರ್ಕಾರ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಶಿವಲಿಂಗಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ).

<u>ಗೆ:</u>

1. ಎಲ್ಲಾ ವಿಶ್ವವಿದ್ಯಾಲಯಗಳ ಕುಲಪತಿಗಳು (ಸರ್ಕಾರದ ಉಪ ಕಾರ್ಯದರ್ಶಿ, ವಿವಿ ಮುಖಾಂತರ)
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ಆಯುಕ್ತರು, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು.
4. ಆಯುಕ್ತರು, ಸಾರಿಗೆ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ಕಂಠೀರವ ಕ್ರೀಡಾಂಗಣ, ಕಸ್ತೂರಿಬಾ ರಸ್ತೆ, ಸಂಪಂಗಿರಾಮ ನಗರ, ಬೆಂಗಳೂರು.
8. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
9. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು.
10. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು.
11. ಮುಖ್ಯ ಆಡಳಿತಾಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
12. ಶ್ರೀ ಡಿ.ಆರ್. ಪಾಟೀಲ್, ಮಾಜಿ ಶಾಸಕರು.
13. ಶ್ರೀ ನೆ.ಲ.ನರೇಂದ್ರಬಾಬು, ಮಾಜಿ ಶಾಸಕರು.
14. ಶ್ರೀ. ಬರಗೂರು ರಾಮಚಂದ್ರಪ್ಪ, ಖ್ಯಾತ ಸಾಹಿತಿಗಳು.
15. ಶ್ರೀ ಶ್ರೀಕಾಂತ, ಸಮನ್ವಯಾಧಿಕಾರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
16. ಶ್ರೀ ಗಣನಾಥಶೆಟ್ಟಿ, ಎನ್.ಎಸ್.ಎಸ್. ರಾಜ್ಯ ಸಂಯೋಜಕರು, ಬೆಂಗಳೂರು.
17. ಶ್ರೀ ರಾಮಕೃಷ್ಣ ಮಠ, ಬುಲ್ ಟೆಂಪಲ್ ರಸ್ತೆ, ಬೆಂಗಳೂರು-19.
18. ಹಿರಿಯ ಪದಾಧಿಕಾರಿ, ನೆಹರು ಯುವ ಕೇಂದ್ರ, ಬೆಂಗಳೂರು.

19. ಶ್ರೀ ಮಂಜುನಾಥ, ಎನ್.ಎಸ್.ಯು.ಐ. ರಾಜ್ಯಾಧ್ಯಾಕ್ಷರು, ಬೆಂಗಳೂರು.ಎಲ್ಲಾ ಜಂಟಿ ನಿರ್ದೇಶಕರುಗಳು, ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ, ಬೆಂಗಳೂರು / ಮೈಸೂರು / ಮಂಗಳೂರು / ಶಿವಮೊಗ್ಗ / ಧಾರವಾಡ / ಕಲಬುರಗಿ(ಕಾಲೇಜು ಶಿಕ್ಷಣ ಆಯುಕ್ತರ ಮುಖಾಂತರ).

20. ಎಲ್ಲಾ ಪ್ರಾಂಶುಪಾಲರುಗಳು, ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಪ್ರಥಮ ದರ್ಜೆ ಕಾಲೇಜುಗಳು / ಇಂಜನಿಯರಿಂಗ್ ಕಾಲೇಜುಗಳು / ಪಾಲಿಟೆಕ್ನಿಕ್ ಕಾಲೇಜುಗಳು(ಕಾಲೇಜು ಶಿಕ್ಷಣ ಆಯುಕ್ತರು / ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ).

21. ಎಲ್ಲಾ ಪ್ರಾಂಶುಪಾಲರುಗಳು, ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳು(ಪದವಿ ಪೂರ್ವ ಶಿಕ್ಷಣ ನಿರ್ದೇಶಕರ ಮುಖಾಂತರ).

**ಪ್ರತಿ:**

1) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಮಾನ್ಯ ಉನ್ನತ ಶಿಕ್ಷಣ ಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3) ಮಾನ್ಯ ಗೃಹ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4) ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5) ಮಾನ್ಯ ಸಾರಿಗೆ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6) ಮಾನ್ಯ ವಸತಿ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7) ಮಾನ್ಯ ಕೃಷಿ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8) ಮಾನ್ಯ ವಿಜ್ಞಾನ, ತಂತ್ರಜ್ಞಾನ, ಯೋಜನೆ ಮತ್ತು ಸಾಂಖ್ಯಿಕ ಮಂತ್ರಿಗಳ ಆಪ್ತ ಕಾರ್ಯದರ್ಶಿ, ಬೆಂಗಳೂರು.
9) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
10) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
11) ಮಾನ್ಯ ಯುವಜನ ಸೇವೆ ಮತ್ತು ಮೀನುಗಾರಿಕೆ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
12) ಪೂಜ್ಯ ಮಹಾಪೌರರು, ಬೆಂಗಳೂರು ಮಹಾನಗರ ಪಾಲಿಕೆ ಇವರ ಆಪ್ತ ಕಾರ್ಯದರ್ಶಿ.
13) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
14) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರು.
15) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರು.
16) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರು.
17) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಾರಿಗೆ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರು.
18) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**<u>ಸ್ವಾಮಿ ವಿವೇಕಾನಂದ ರವರ 154ನೇ ಜನ್ಮ ದಿನಾಚರಣೆಯನ್ನು ಆಚರಿಸುವ ಸಂಬಂಧ ದಿನಾಂಕ:02.01.2017 ರಂದು ಅಪರಾಹ್ನ 3.00 ಗಂಟೆಗೆ ಮಾನ್ಯ ಉನ್ನತ ಶಿಕ್ಷಣ ಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು</u>**

<u>ಸಭೆಯಲ್ಲಿ ಹಾಜರಿದ್ದ ಸಚಿವರು, ಶಾಸಕರು ಮತ್ತು ಅಧಿಕಾರಿಗಳು:</u>

01. ಮಾನ್ಯ ಉನ್ನತ ಶಿಕ್ಷಣ ಮಂತ್ರಿಯವರು
02. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮಂತ್ರಿಯವರು
03. ಶ್ರೀ ಡಿ.ಆರ್. ಪಾಟೀಲ್, ಮಾಜಿ ಶಾಸಕರು
04. ಮಾನ್ಯ ಅಪರಮುಖ್ಯ ಕಾರ್ಯದರ್ಶಿ, ಉನ್ನತ ಶಿಕ್ಷಣ
05. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ
06. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ
07. ಇತರೆ ಇಲಾಖೆಗಳ ಅಧಿಕಾರಿಗಳು

ಸ್ವಾಮಿ ವಿವೇಕಾನಂದ ರವರ 154ನೇ ಜನ್ಮ ದಿನಾಚರಣೆಯನ್ನು ಆಚರಿಸುವ ಸಂಬಂಧದಲ್ಲಿ ಕರೆಯಲಾದ ಸಭೆಗೆ ಆಗಮಿಸಿದ ಗಣ್ಯರು ಮತ್ತು ಅಧಿಕಾರಿ ವೃಂದವನ್ನು ಸ್ವಾಗತಿಸುತ್ತಾ ಮಾನ್ಯ ಉನ್ನತ ಶಿಕ್ಷಣ ಮಂತ್ರಿಯವರು ಸಭೆಯನ್ನು ಆರಂಭಿಸಿದರು.

ಸಭೆಯಲ್ಲಿ ಉಪಸ್ಥಿತರಿದ್ದ ಮಾನ್ಯ ಉನ್ನತ ಶಿಕ್ಷಣ ಮಂತ್ರಿಯವರು ಸ್ವಾಮಿ ವಿವೇಕಾನಂದರವರ 154ನೇ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವ ಅವಶ್ಯಕತೆಯ ಬಗ್ಗೆ ಸಭೆಯಲ್ಲಿ ನೆರೆದಿದ್ದ ಸಚಿವರು, ಶಾಸಕರು, ಮತ್ತು ಅಧಿಕಾರಿಗಳಿಗೆ ವಿವರಿಸುತ್ತಾ, ಸದರಿ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಸಮಯಾವಕಾಶದ ಅಭಾವ ಇರುವುದರಿಂದ ಪ್ರಸ್ತುತ ಸಾಲಿನಲ್ಲಿ ಯಾವ ರೀತಿಯಾಗಿ ಆಚರಿಸಬೇಕೆಂಬುದರ ಬಗ್ಗೆ ಸಲಹೆಯನ್ನು ಕೋರಿದರು. ಮತ್ತು ಈ ಸಂಬಂಧ ದಿನಾಂಕ:27.07.2016 ರಂದು ನಡೆದ ಸಭೆಯಲ್ಲಿ ತೆಗೆದುಕೊಂಡ ಕ್ರಮದ ಬಗ್ಗೆಯೂ ಸಹ ವಿವರಿಸಿದರು. ಸದರಿ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನದಂತೆ ಸ್ವಾಮಿ ವಿವೇಕಾನಂದರ ವಿಚಾರಧಾರೆ ಮತ್ತು ತತ್ವಾದರ್ಶಗಳ ಬಗ್ಗೆ ವಿದ್ಯಾರ್ಥಿ ಸಮೂಹಗಳಿಂದ ಚರ್ಚಾ ಸ್ಪರ್ಧೆಗಳನ್ನು ಏರ್ಪಡಿಸಿ, ಸದರಿ ಚರ್ಚಾ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವುದಲ್ಲದೇ, ಸದರಿ ಜಯಂತಿಯನ್ನು ಜಿಲ್ಲಾ ಮಟ್ಟದಲ್ಲಿನ ಸರ್ಕಾರಿ/ಅನುದಾನಿತ/ಅನುದಾನ ರಹಿತ ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳಲ್ಲಿ, ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಹಾಗೂ ಎಲ್ಲೆಲ್ಲಿ ರಾಮಕೃಷ್ಣ ಆಶ್ರಮಗಳಿವೆಯೋ ಅಂತಹ ಕಡೆ ಅವರುಗಳ ಸಹಯೋಗದೊಂದಿಗೆ ಸದರಿ ಜಿಲ್ಲೆಯ ಉಸ್ತುವಾರಿ ಸಚಿವರುಗಳ ಅಧ್ಯಕ್ಷತೆ ಮತ್ತು ಜಿಲ್ಲಾಧಿಕಾರಿಗಳ ಉಪಾಧ್ಯಕ್ಷತೆಯೊಂದಿಗೆ ಮತ್ತು ಸದರಿ ಜಿಲ್ಲೆಯ ಮಾನ್ಯ ಶಾಸಕರುಗಳೊಂದಿಗೆ ಹಾಗೂ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರು ಮತ್ತು ಅಧ್ಯಾಪಕ ವೃಂದದೊಂದಿಗೆ ಹಾಗೂ ಎನ್.ಸಿ.ಸಿ. ಮತ್ತು ಎನ್.ಎಸ್.ಎಸ್. ವಿದ್ಯಾರ್ಥಿಗಳನ್ನೊಳಗೊಂಡಂತೆ ಇತರೆ ವಿದ್ಯಾರ್ಥಿ ಸಮೂಹದೊಂದಿಗೆ ದಿನಾಂಕ:12.01.2017 ರಂದು

ನಡೆಸುವಂತೆ ಸಂಬಂಧಪಟ್ಟ ಜಿಲ್ಲಾಧಿಕಾರಿಯವರಿಗೆ ಸೂಚಿಸಲು ತೀರ್ಮಾನಿಸಲಾಯಿತು. ಅಲ್ಲದೇ, ದಿನಾಂಕ:13.01.2017 ರಿಂದ 17.01.2017 ರವರೆಗೆ ತಾಲ್ಲೂಕು ಮಟ್ಟದಲ್ಲಿ ಹಾಗೂ ದಿನಾಂಕ:18.01.2017 ರಂದು ರಾಜ್ಯ ಮಟ್ಟದಲ್ಲಿ ಸ್ವಾಮಿ ವಿವೇಕಾನಂದರ ಜಯಂತಿಯನ್ನು ಆಚರಿಸಲು ನಿರ್ಣಯಿಸಲಾಯಿತು.

ಸ್ವಾಮಿ ವಿವೇಕಾನಂದರ 154ರ ಜಯಂತಿಯನ್ನು ಆಚರಿಸಲು ಪ್ರತಿ ತಾಲ್ಲೂಕಿಗೆ ತಲಾ ಒಂದು ಲಕ್ಷ ರೂಪಾಯಿಗಳ ಅನುದಾನವನ್ನು ಹಾಗೂ ಜಿಲ್ಲಾಮಟ್ಟದಲ್ಲಿ ಈ ಕಾರ್ಯಕ್ರಮವನ್ನು ಕೈಗೊಳ್ಳಲು ತಲಾ ಮೂರು ಲಕ್ಷ ರೂಪಾಯಿಗಳ ಅನುದಾನವನ್ನು ಹಾಗೂ ರಾಜ್ಯಮಟ್ಟದಲ್ಲಿ ಒಂದು ಕೋಟಿ ರೂಪಾಯಿಗೂ ಮಿಗಿಲಾದ ಮೊತ್ತದೊಂದಿಗೆ ಆಚರಿಸಲು ತೀರ್ಮಾನಿಸಿ, ರಾಜ್ಯದ ಕೇಂದ್ರಸ್ಥಾನವಾದ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಈ ಕಾರ್ಯಕ್ರಮವನ್ನು ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಆಚರಿಸಲು ತೀರ್ಮಾನಿಸಲಾಯಿತು. ಬೆಂಗಳೂರು ನಗರದ ಬೆಂಗಳೂರು ಮಹಾನಗರ ಪಾಲಿಕೆಯ ವಲಯವಾರು ಇರುವ ಎಲ್ಲಾ ಪದವಿ ಪೂರ್ವ ಕಾಲೇಜುಗಳು, ಪದವಿ ಕಾಲೇಜುಗಳು, ಇಂಜಿನಿಯರಿಂಗ್, ಪಾಲಿಟೆಕ್ನಿಕ್ ಮತ್ತು ವಿಶ್ವವಿದ್ಯಾನಿಲಯಗಳಲ್ಲಿನ ವಿದ್ಯಾರ್ಥಿಗಳನ್ನು ಒಟ್ಟುಗೂಡಿಸಿ, ಸದರಿ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಹಾಗೂ ಚರ್ಚಾಸ್ಪರ್ಧೆಯಲ್ಲಿ ವಿಜೇತರಾದಂತಹ ವಿದ್ಯಾರ್ಥಿಗಳಿಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನಗಳನ್ನು ಸ್ವಾಮಿ ವಿವೇಕಾನಂದರ ತತ್ವಾದರ್ಶಗಳ ಬಗ್ಗೆ ಇರುವ ವಿಶೇಷ ಪುಸ್ತಕಗಳೊಂದಿಗೆ Kindle (e-book) ಗಳನ್ನು ವಿತರಿಸುವ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಹಮ್ಮಿಕೊಳ್ಳಲು ತೀರ್ಮಾನಿಸಲಾಯಿತು. ಸದರಿ ಪುಸ್ತಕ ಮತ್ತು Kindle ಗಳನ್ನು ಬೆಂಗಳೂರಿನ ಎಂ.ಎಸ್.ಐ.ಎಲ್. ಮುಖಾಂತರ ಖರೀದಿಸಲು ಸಹ ತೀರ್ಮಾನಿಸಲಾಯಿತು. ಅಲ್ಲದೇ, ಈ ಜಯಂತಿಯನ್ನು ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲು ಎಲ್ಲಾ ಜಿಲ್ಲಾಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಹಾಗೂ ನಿರ್ದೇಶಕರು, ಪೌರಾಡಳಿತ ಇಲಾಖೆರವರುಗಳಿಗೆ ಪತ್ರ ಬರೆದು ಎಲ್ಲಾ ಪುರಸಭೆಗಳಿಂದಲೂ ಸದರಿ ಕಾರ್ಯಕ್ರಮವನ್ನು ಆಯೋಜಿಸುವಂತೆ ತಿಳಿಸಲು ತೀರ್ಮಾನಿಸಲಾಯಿತು.

ಮೇಲ್ಕಂಡ ತೀರ್ಮಾನಗಳ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮಂತ್ರಿಯವರು ಮತ್ತು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮಂತ್ರಿಯವರು ಒಟ್ಟುಗೂಡಿ ಪತ್ರಿಕಾಗೋಷ್ಠಿ ನಡೆಸಲು ತೀರ್ಮಾನಿಸಿ, ವಂದನೆಗಳೊಂದಿಗೆ ಸಭೆ ಮುಕ್ತಾಯಗೊಂಡಿತು.

(ಭರತ್ ಲಾಲ್ ಮೀನಾ)
ಅಪರ ಮುಖ್ಯ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ